# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರು [ರಾಜಾಜಿನಗರ] ರವರ ಕಛೇರಿ, ಬಿ.ಬಿ.ಎಂ.ಪಿ.
ವಾಣಿಜ್ಯ ಸಂಕೀರ್ಣ, 2ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು10

---

ಸಂಖ್ಯೆ: ಸ.ಕಾ.ನಿ.ಅ/ರಾನ/ಪಿಆರ್/ 05 /21-22. ದಿನಾಂಕ: 07-08-2021

**ಸಭಾ ಸೂಚನಾ ಪತ್ರ:-**

**ವಿಷಯ:** ವಾರ್ಡ್ ನಂ. 100/ಬಸವೇಶ್ವರನಗರ ವಾರ್ಡ್ ಸಮಿತಿ ಸಭೆಗೆ ಹಾಜರಾಗುವ ಬಗ್ಗೆ

*************

ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ. ರವರ ಆದೇಶದ ರೀತ್ಯಾ ವಾರ್ಡ್ ನಂ. 100/ಬಸವೇಶ್ವರನಗರ ವಾರ್ಡ್ ಸಮಿತಿ ಸಭೆಯನ್ನು ನೋಡಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ದಿನಾಂಕ: **11-08-2021** ರಂದು ಬೆಳಗ್ಗೆ **11.00** ಗಂಟೆಗೆ ವಾರ್ಡ್ ಸಮಿತಿ ಸಭೆಯು ಬಿ.ಬಿ.ಎಂ.ಪಿ. **ವಾರ್ಡ್ ಕಛೇರಿ, ಬಸವೇಶ್ವರನಗರ** ಇಲ್ಲಿ ಜರುಗಲಿದ್ದು, ತಾವುಗಳು ಈ ಸಭೆಗೆ ತಪ್ಪದೇ ಹಾಜರಾಗಲು ಕೋರಲಾಗಿದೆ.

**ಸಭೆಯಲ್ಲಿ ಚರ್ಚಿಸುವ ವಿಷಯಗಳು:-**

1. ಕೋವಿಡ್-19ರ ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ
2. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ
3. ವಾರ್ಡ್‌ಗಳಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.
4. ವಾರ್ಡ್‌ನ ವಿವಿಧ ಅಭಿವೃದ್ಧಿ ಕಾರ್ಯಗಳ ಬಗ್ಗೆ.
5. ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ.
6. ಬೀದಿ ದೀಪಗಳ ನಿರ್ವಹಣೆ ಬಗ್ಗೆ.
7. ವಿದ್ಯುತ್ ಸರಬರಾಜು [ಬೆಸ್ಕಾಂ] ಗೆ ಸಂಬಂಧಿಸಿದ ವಿಷಯದ ಬಗ್ಗೆ.
8. S.W.D ಕಾಮಗಾರಿ ಪ್ರಗತಿಯಲ್ಲಿರುವ ಹಿನ್ನಲೆಯಲ್ಲಿ ಮಳೆ ನೀರಿನಿಂದ ಮುಳುಗಡೆಯಾಗುವ ಪ್ರದೇಶಗಳ ಸಮಸ್ಯೆ ಬಗ್ಗೆ.

7/8/2021

ನೋಡಲ್ ಅಧಿಕಾರಿಗಳು
ವಾರ್ಡ್ ನಂ. 100

**ಪ್ರತಿಯನ್ನು:**

1. ಮಾನ್ಯ ಜಂಟಿ ಆಯುಕ್ತರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು , ರಾಜಾಜಿನಗರ ವಿಭಾಗ/ಯೋಜನೆ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.

ಪು.ತಿ.ನೋ.

Scanned with CamScanner

5. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಘನತ್ಯಾಜ್ಯ] ರಾಜಾಜಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬಿ.ಡ್ಬ್ಲ್ಯೂ.ಎಸ್.ಎಸ್.ಬಿ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬೀದಿ ದೀಪಗಳ ನಿರ್ವಹಣೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬೆಸ್ಕಾಂ] ಉಪವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ರಸ್ತೆ ಮತ್ತು ಮೂಲ ಭೂತ ಸೌಕರ್ಯ,] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [S.W.D] ರವರ ಮಾಹಿತಿಗಾಗಿ ಸಲ್ಲಿಸಿದೆ.
10. ಕಾಂಟ್ರಕ್ಟ್ ಟ್ರೇಸಿಂಗ್, ನೋಡಲ್ ಅಧಿಕಾರಿ
11. ಕಲ್ಯಾಣ ಅಧಿಕಾರಿ, ಪಶ್ಚಿಮ ವಲಯ, ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
12. ಹೋಮ್ ಕ್ವಾರಂಟೈನ್, ಸ್ಕ್ವಾಡ್ ನೋಡಲ್ ಅಧಿಕಾರಿ, ರಾಜಾಜಿನಗರ ವಿಭಾಗ,
13. ಕಲ್ಯಾಣಾಧಿಕಾರಿ, ಪಶ್ಚಿಮ ವಲಯ
14. ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಪಶ್ಚಿಮ ವಲಯ
15. ಠಾಣಾಧಿಕಾರಿಗಳು, ಬಸವೇಶ್ವರನಗರ
16. ಸಂಚಾರಿ ಪೋಲಿಸ್ ಠಾಣೆ, ವಿಜಯನಗರ
17. ಸಹ ಕಂದಾಯ ಅಧಿಕಾರಿ [ರಾಜಾಜಿನಗರ] ವಲಯ ರವರ ಮಾಹಿತಿಗಾಗಿ ಸಲ್ಲಿಸಿದೆ.
18. ಕಚೇರಿ ಕಡತಕ್ಕೆ.

Scanned with CamScanner

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 100, ಬಸವೇಶ್ವರನಗರ, ಬೆಂಗಳೂರು**

ಸಂಖ್ಯೆ:ಸ.ಅ/ವಾ-100/ಪಿಆರ್/ 05 / 2021-22 ದಿನಾಂಕ: 13-08-2021

**ವಾರ್ಡ್ ಸಮಿತಿ ಸಭೆಯ ನಡವಳಿಗಳು:-**

**ವಿಷಯ:** ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ. ರವರ ಆದೇಶ ಸಂಖ್ಯೆ: ಬಿ12[5]ಪಿಆರ್/35/2020-21. ದಿನಾಂಕ: 21.09.2020ರ ಆದೇಶದಂತೆ ದಿನಾಂಕ: 11-08-2021 ರಂದು ವಾರ್ಡ್ ನಂ. 100 ಬಸವೇಶ್ವರನಗರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು:

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು:-**

1. ಶ್ರೀ ದೃವರಾಜ್, ನೋಡಲ್ ಅಧಿಕಾರಿಗಳು, ಎಡಿ.ಟಿ.ಪಿ. ವಾರ್ಡ್ ನಂ. 100
2. ಶ್ರೀ ಸುಭಾಷ್ ಪಾಟೀಲ್, ಸಹಾಯಕ ಅಭಿಯಂತರರು, ವಾರ್ಡ್ ನಂ. 100
3. ಶ್ರೀಮತಿ ಸಂಧ್ಯಾ.ಕೆ.ಪಿ. ಹಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ರಘು, ಕಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ ಮಂಜುನಾಥ್, ಸಂಚಾರಿ ಪೋಲಿಸ್ ಅಧಿಕಾರಿಗಳು
6. ಶ್ರೀ ಸಂಗಪ್ಪ, ಪೋಲಿಸ್ ಠಾಣಾ ಅಧಿಕಾರಿ,
7. ಶ್ರೀ ಮಾರುತಿ, ಅರಣ್ಯಾಧಿಕಾರಿಗಳು
8. ಶ್ರೀ ಮಲ್ಲೇಶ್, ಕಂದಾಯ ಅಧಿಕಾರಿ
9. ಶ್ರೀ ಮೋಹನ್ ಕುಮಾರ್ , ಬಿ.ಡ್ಬ್ಲ್ಯು.ಎಸ್.ಎಸ್.ಬಿ. ಅಧಿಕಾರಿ.

ಹಿಂದಿನ ಸಭೆಗಳ ನಿರ್ಣಯಗಳಲ್ಲಿ ಅನುಪಾಲನೆ ಹಾಗೂ ಸಾರ್ವಜನಿಕರಿಗೆ ಸಮರ್ಪಕ ಸೇವೆ ನೀಡುವ ಬಗ್ಗೆ ಹಿಂದಿನ ಸಭೆಗಳಲ್ಲಿ ತೆಗೆದುಕೊಂಡ ನಿರ್ಧಾರಗಳಿಗೆ ಅನುಪಾಲನೆ ಮತ್ತು ವಾರ್ಡ್‌ನಲ್ಲಿ ಸಾರ್ವಜನಿಕರ ದಿನನಿತ್ಯ ಮೂಲಭೂತ ಸೌಕರ್ಯಗಳು ಹಾಗೂ ಸೇವೆ ಒದಗಿಸುವ ಸಂಬಂಧ ನಿರಂತರವಾಗಿ ಕ್ರಮವಿಡಲು ಹಾಜರಿದ್ದ ಎಲ್ಲಾ ಬಿಬಿಎಂಪಿ ಅಧಿಕಾರಿ ಸಿಬ್ಬಂದಿಯವರಿಗೆ ತಿಳಿಸಿದರು.

1. ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್-100 ರಲ್ಲಿ ಕೋವಿಡ್-19ಗೆ ಸಂಭಂಧಿಸಿದಂತೆ ಕೋ-ವ್ಯಾಕ್ಸಿನ್/ ಕೋವಿ-ಶೀಲ್ಡ್ ಲಸಿಕೆ ನೀಡುವ ಕಾರ್ಯಕ್ರಮದ ಪ್ರಗತಿಯ ಬಗ್ಗೆ ವಿವರಣೆ ನೀಡುವಂತೆ ಸಭೆಯಲ್ಲಿ ತಿಳಿಸಿದರು.
2. ವಾರ್ಡಿನ ಸದಸ್ಯರು ಮಾತನಾಡಿ, ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗದಂತೆ ತುರ್ತಾಗಿ ರಸ್ತೆ ಗುಂಡಿಗಳನ್ನು ಮುಚ್ಚಲು ಸೂಚಿಸಲಾಗಿತ್ತು. ಆದರೆ ಇದುವರೆವಿಗೂ ರಸ್ತೆ ಗುಂಡಿಗಳನ್ನು ಮುಚ್ಚದಿರುವ ಬಗ್ಗೆ ಅಸಮಧಾನ ವ್ಯಕ್ತಪಡಿಸಿದರು. ನೋಡಲ್ ಅಧಿಕಾರಿಗಳು ತ್ವರಿತ ಗತಿಯಲ್ಲಿ ಸಂಪೂರ್ಣವಾಗಿ

Scanned with CamScanner

ವಾರ್ಡಿನ ರಸ್ತೆ ಗುಂಡಿಗಳನ್ನು ಮುಚ್ಚಲು ಸೂಚಿಸಲಾಗಿದ್ದು, ಇದುವರೆವಿಗೂ ಮುಚ್ಚದಿರುವ ಬಗ್ಗೆ ಅಸಮಧಾನ ವ್ಯಕ್ತಪಡಿಸಿ ಸಹಾಯಕ ಅಭಿಯಂತರರು ರವರಿಗೆ ಸೂಚಿಸಿದರು

3. ಸದಸ್ಯರು ಸದಸ್ಯರು ಬೀದಿ ದೀಪಗಳ ನಿರ್ವಹಣೆಯ ಬಗ್ಗೆ ಅಸಮದಾನ ವ್ಯಕ್ತಪಡಿಸಿದರು. ನೋಡಲ್ ಅಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಬೀದಿ ದೀಪದ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಸೂಚಿಸಿವುದಾಗಿ ತಿಳಿಸಿದರು.
4. ಸದಸ್ಯರು ವಾಹನ ನಿಲುಗಡೆಯನ್ನು ತೆರವುಗೊಳಿಸುವ ಬಗ್ಗೆ ಪ್ರಸ್ತಾಪಿಸಿದರು ನೋಡಲ್ ಅಧಿಕಾರಿಗಳು ವಾರ್ಡಿನ ಹಲವು ರಸ್ತೆ ಬದಿಗಳಲ್ಲಿ ಹಳೇಯ ಅನುಪಯುಕ್ತ ವಾಹನಗಳನ್ನು ನಿಲುಗಡೆ ಮಾಡಿರುವುದನ್ನು ಖುದ್ದಾಗಿ ಪರಿಶೀಲಿಸಿರುತ್ತೇನೆ. ಸದರಿ ವಾಹನಗಳನ್ನು ತೆರವುಗೊಳಿಸುವಂತೆ ಹಾಜರಿದ್ದ ಸಂಚಾರಿ ಪೋಲಿಸ್ ಅಧಿಕಾರಿಗಳಿಗೆ ಸೂಚಿಸಿದರು.
5. ವಾರ್ಡ್ ವ್ಯಾಪ್ತಿಯ ಪಾರ್ಕಿನಲ್ಲಿ ಸ್ವಚ್ಛತಾ ಕಾರ್ಯ, ಉದ್ಯಾನವನದಲ್ಲಿ ಔಷಧಿ ಸಸಿಗಳನ್ನು ನೆಡಸಲು ಕ್ರಮ ಜರುಗಿಸುವಂತೆ ಹಾಜರಿದ್ದ ತೋಟಗಾರಿಕಾ ಪರಿವೀಕ್ಷಕರಿಗೆ ಸೂಚಿಸಿದರು.
6. ಸಭೆಯಲ್ಲಿ ಕಂದಾಯ ಅಧಿಕಾರಿಗೆ ವಾರ್ಡ್ ವ್ಯಾಪ್ತಿಯಲ್ಲಿನ ಬಿಬಿಎಂಪಿಗೆ ಸಂಬಂಧಿಸಿದ ಆಸ್ತಿಗಳನ್ನು ಗುರುತಿಸಿ ಅದರ ಸಂಬಂಧಪಟ್ಟ ದಾಖಲೆಗಳನ್ನು ಮುಂದಿನ ಸಭೆಯಲ್ಲಿ ಮಂಡಿಸುವಂತೆ ಸೂಚಿಸಿದರು.
7. ವಾರ್ಡ್ ವ್ಯಾಪ್ತಿಯಲ್ಲಿನ ಶೀತಲ ಮರಗಳನ್ನು ಮತ್ತು ವಿದ್ಯುತ್ ಕಂಬಗಳಿಗೆ ಅಡ್ಡಲಾಗಿರುವ ಮರಗಳನ್ನು ಗುರುತಿಸಿ, ಕೂಡಲೇ ಕ್ರಮವಹಿಸುವಂತೆ ಅರಣ್ಯ ಇಲಾಖೆ, ಬಿಬಿಎಂಪಿ ರವರಿಗೆ ಸೂಚನೆ ನೀಡಿದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡ ಎಲ್ಲಾ ಇಲಾಖೆಗಳ ಸಮನ್ವತೆಯಿಂದ ಕೆಲಸ ನಿರ್ವಹಿಸಲು ಹಾಗೂ ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾಧನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

Divya M J
13/8/2021

ನೋಡಲ್ ಅಧಿಕಾರಿಗಳು,
ವಾರ್ಡ್ ನಂ. 100/ಬಸವೇಶ್ವರನಗರ.

Scanned with CamScanner